ಚಿಂತಾಮಣಿ ನಗರದ ಸರ್ಕಾರಿ ಬಾಲಕಿಯರ ಕಾಲೇಜಿನ ಕಟ್ಟಡ ನಿರ್ಮಾಣದ ದುರವಸ್ಥೆ

457 (370) ಶ್ರೀ ಚೌಡಾರೆಡ್ಡಿ (ಚಿಂತಾಮಣಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಚಿಂತಾಮಣಿ ನಗರದ ಬಾಲಕಿಯರ ಪದವೀಪೂರ್ವ ಕಾಲೇಜಿನ ಕಟ್ಟಡ ಕಾಮಗಾರಿಗೆ 6-7 ವರ್ಷಗಳ ಹಿಂದೆ ಸರ್ಕಾರದಿಂದ ಮಂಜೂರಾಗಿ ಲೋಕೋಪಯೋಗಿ ಇಲಾಖೆಯವರಿಗೆ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

2. ಇದರ ಸಲುವಾಗಿ 8.00ಲಕ್ಷ ರೂಪಾಯಿಗಳನ್ನು ಸಹ ಹಿಂದೆಯೇ ಮಂಜೂರಾಗಿದ್ದರೂ ಕಟ್ಟಡಗಳು ಪೂರ್ಣಗೊಳ್ಳದೇ ಗೋಡೆಗಳನ್ನು ಮಾತ್ರ ನಿರ್ಮಿಸಿ ಉಳಿಕೆ ಕಾಮಗಾರಿಗಳನ್ನು ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

3. ಇದರಿಂದ ಅಲ್ಲಿನ ವಿದ್ಯಾರ್ಥಿನಿಯರಿಗೆ ಅನೇಕ ತೊಂದರೆಗಳು ಉಂಟಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೆ; ಹಾಗಿದ್ದಲ್ಲಿ ಸರ್ಕಾರವು ಕೈಗೊಳ್ಳಲಿರುವ ಕ್ರಮಗಳೇನು?

ಪ್ರೊ.ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

1. ಹೌದು.

2. ಹೌದು ತಿಳಿದಿದೆ.

3. ಈ ಕಾಲೇಜಿನಲ್ಲಿ 5 ಬೋಧನಾ ಕೊಠಡಿಗಳ ನಿರ್ಮಾಣಕ್ಕೆ 1996-97ನೇ ಸಾಲಿನಲ್ಲಿ ರೂ.8.00 ಲಕ್ಷ ಅಂದಾಜುಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದು. ಅದರಲ್ಲಿ 4.20 ಲಕ್ಷಗಳನ್ನು ಲೋಕೋಪಯೋಗಿ ಇಲಾಖೆಯವರು ಖರ್ಚುಮಾಡಿ 4 ಕೊಠಡಿಗಳ ಕಾಮಗಾರಿಯನ್ನು ಚಾವಣಿ ಹಂತದವರಗೆ ನಿರ್ಮಿಸಿರುತ್ತಾರೆ. ಉಳಿದ ಕಾಮಗಾರಿಗಳನ್ನು ಪೂರೈಸಲು ಅವಶ್ಯಕವಾಗಿರುವ ರೂ.4.00 ಲಕ್ಷಗಳನ್ನು ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡಲು ಕ್ರಮಕೈಗೊಳ್ಳಲಾಗುವುದು.

ರಾಜ್ಯದಲ್ಲಿ ಅರೆ ಕಾಲಿಕ ಶಿಕ್ಷಕರನ್ನು ಖಾಯಂಗೊಳಿಸುವುದು

458 (372) ಶ್ರೀ ಚೌಡಾರೆಡ್ಡಿ (ಚಿಂತಾಮಣಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ರಾಜ್ಯ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಪೂರ್ಣಕಾಲಿಕ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರೆ ಕಾಲಿಕ ಶಿಕ್ಷಕರ ಸಂಖ್ಯೆ ಎಷ್ಟು?

2. 1997ರಲ್ಲಿ ಸಚಿವ ಸಂಪುಟವು ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಪೂರ್ಣಕಾಲಿಕ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರೆಕಾಲಿಕ ಶಿಕ್ಷಕರುಗಳನ್ನು ಖಾಯಂ ಮಾಡಲು ಸಚಿವ ಸಂಪುಟವು ತೀರ್ಮಾನಿಸಿರುವುದು ನಿಜವೆ?

3. ಮೇಲ್ಕಂಡ ಎಲ್ಲಾ ಶಿಕ್ಷಕರ ವಯೋಮಿತಿ ಮೀರುವುದರಿಂದ ಸರ್ಕಾರದ ಕೆಲಸದಿಂದ ವಂಚಿತರಾಗುವುದು ನಿಜವೆ?

4. 1998ನೇ ಇಸವಿಯಿಂದ ಸರ್ಕಾರವು ಅರೆಕಾಲಿಕ ಶಿಕ್ಷಕರುಗಳಿಗೆ ಪೂರ್ಣ ವೇತನ (ಮೂಲ ವೇತನ, ತುಟ್ಟಿಭತ್ಯೆ, ಮನೆ ಬಾಡಿಗೆ ಭತ್ಯೆ) ಸಲ್ಲಿಸುತ್ತಿದ್ದು ಅವರನ್ನು ಖಾಯಂಗೊಳಿಸಿ ಅವರಿಗೆ ನ್ಯಾಯ ದೊರಕಿಸಿ ಕೊಡಲಾಗುವುದೆ?

ಪ್ರೊ.ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

1. ಪ್ರಾಥಮಿಕ ಶಾಲೆಗಳಲ್ಲಿ ಅರೆ ಕಾಲಿಕ ಶಿಕ್ಷಕರು ಇರುವುದಿಲ್ಲ. ಪ್ರೌಢ ಶಾಲೆಗಳಲ್ಲಿ 638 ಅರೆಕಾಲಿಕ ಶಿಕ್ಷಕರು ಪೂರ್ಣಕಾಲಿಕ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ.

2. ಇಲ್ಲ.

3. ಅರೆಕಾಲಿಕ ಶಿಕ್ಷಕರು ಸಲ್ಲಿಸಿದ ಸೇವೆಗೆ ಅನುಗುಣವಾಗಿ ಕೃಪಾಂಕ ಹಾಗೂ ಗರಿಷ್ಟ ವಯೋಮಿತಿಯಲ್ಲಿ ವಿನಾಯ್ತಿ ಅವಕಾಶ ಕಲ್ಪಿಸಿದ್ದು, ನೇಮಕಾತಿ ಸಮಯದಲ್ಲಿ ಇತರೆ ಅಭ್ಯರ್ಥಿಗಳೊಂದಿಗೆ ಅರ್ಜಿ ಸಲ್ಲಿಸಿ ಅರ್ಹತೆ ಪಡೆದು ಆಯ್ಕೆಯಾದಲ್ಲಿ ಖಾಯಂ ನೇಮಕಾತಿ ಮಾಡಲಾಗುವುದು. ಉಳಿದಂತೆ ಯಾವುದೇ ಪರಿಹಾರಕ್ಕೆ ಅರ್ಹರಿರುವುದಿಲ್ಲ.

4. ಅರೆಕಾಲಿಕ ಶಿಕ್ಷಕರನ್ನು ನೇರವಾಗಿ ಸೇವೆಯಲ್ಲಿ ಖಾಯಂಗೊಳಿಸಲು ನ್ಯಾಯಾಲಯದ ತೀರ್ಪುಗಳು ಮತ್ತು ಸರ್ಕಾರದ ನಿಯಮಗಳಲ್ಲಿ ಅವಕಾಶವಿಲ್ಲವೆಂದು ಸ್ಪಷ್ಟಪಡಿಸಿದೆ. ನೇಮಕಾತಿ ಸಮಯದಲ್ಲಿ ಅರ್ಹತೆ ಪಡೆದು ಆಯ್ಕೆಯಾದಲ್ಲಿ ಮಾತ್ರ ಖಾಯಂ ನೇಮಕಾತಿಗೆ ಅರ್ಹರಾಗುತ್ತಾರೆ.

ಅಥಣಿ ತಾಲ್ಲೂಕಿನಲ್ಲಿ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಕೊರತೆ

460 (775) ಶ್ರೀ ಡೊಂಗರಗಾಂವ ಶಹಜಹಾನ್ ಇಸ್ಮಾಯಿಲ್ (ಅಥಣಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬೆಳಗಾವಿ ಜಿಲ್ಲೆ ಅಥಣಿ ತಾಲ್ಲೂಕಿನಲ್ಲಿ ಅನೇಕ ಹಳ್ಳಿಗಳಲ್ಲಿ ಹಾಗೂ ಜಂಬಗಿ ಸಂಬರಗಿ ಮತ್ತು ಬಳ್ಳಿಗೇರಿ ಗ್ರಾಮಗಳಲ್ಲಿ ವೈದ್ಯಕೀಯ ಸೌಲಭ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು?

2. ಅಥಣಿ ತಾಲ್ಲೂಕಿನ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಮಂಜೂರಾತಿಯಾದ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳ ಸಂಖ್ಯೆಗಳೆಷ್ಟು; ಈಗಕಾರ್ಯನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಎಷ್ಟು; (ಪ್ರತ್ಯೇಕವಾಗಿ ವಿವರ ನೀಡುವುದು)

3. ವೈದ್ಯಾಧಿಕಾರಿಗಳ ಹಾಗೂ ಸಿಬ್ಬಂದಿಯ ಕೊರತೆ ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?